ದಿನಾಂಕ 02-07-2022 ರಂದು ಶನಿವಾರ ಬೆಳಗ್ಗೆ 11:00 ಗಂಟೆಗೆ ಅನ್ನಸಂದ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಹಾಜರಿದ್ದ ಅಧಿಕಾರಿಗಳು :

| | |
|---|---|
| 1. | ಶ್ರೀ. ಜಿ.ಡಿ.ಸೋಮಯ್ಯ (ಸಹಾಯಕ ಅಭಿಯಂತರರು) |
| 2. | ಶ್ರೀ. ರಂಗನಾಥ್ (ಕಿರಿಯ ಆರೋಗ್ಯ ಪರಿವೀಕ್ಷಕರು) |
| 3. | ಶ್ರೀ. ತುಲಸಿ ರಾಮ್ |
| 4. | ಶ್ರೀ,ಸುಭಾಷ್ |
| 5. | ಶ್ರೀ.ಸುಂಕಪ್ಪ |
| . | ನಿವಾಸಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಆಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿಧಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

1) **ಕೋವಿಡ್-19 ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ನಾಲ್ಕನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ನಲ್ಲಿ ಕೋವಿಡ್-19 ನಾಲ್ಕನೇ ಅಲೆಗೆ ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗೃತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

2) **ಬೀದಿ ದೀಪಗಳ ನಿರ್ವಹಣೆ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಜಗಧೀಶ್ ನಗರ ಮತ್ತು ರಮೇಶ್‌ನಗರ 17ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಸಮಪರ್ಕವಾಗಿ ಉರಿಯುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸಿ ವರದಿ ಮಾಡಲು ಸೂಚಿಸಲಾಯಿತು

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

3) **ವಿದ್ಯುತ್ ಸರಬರಾಹು (ಬೆಸ್ಕಾಂ)ಗೆ ಸಂಬಂದಿಸಿದ ವಿಷಯದ ಬಗ್ಗೆ:-**

ವಾರ್ಡ್ ವ್ಯಾಪ್ತಿಯ ಜಗಧೀಶ್ ನಗರದಲ್ಲಿ ವಿದ್ಯುತ್ ಪರಿವರ್ತಕ ದುರಸ್ಥಿಯಲ್ಲಿದ್ದು ಸರಿಪಡಿಸಬೇಕೆಂದು ಮತ್ತು 2ನೇ ಮುಖ್ಯರಸ್ತೆ, 3ನೇ ಮುಖ್ಯರಸ್ತೆ, 4ನೇ ಮುಖ್ಯರಸ್ತೆ ಹಾಗೂ 3ನೇ ಅಡ್ಡರಸ್ತೆಯಲ್ಲಿ ಬೀದಿ ದೀಪದ ಕಂಬವು ಹಳಾಗಿದ್ದು ಇದನ್ನು ಸರಿಪಡಿಸಬೇಕೆಂದು ಸಾರ್ವಜನಿಕರು ಕೋರಿರುತ್ತಾರೆ, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸಿ ವರದಿ ಮಾಡಲು ಸೂಚಿಸಲಾಯಿತು.

ಕ್ರಮಕ್ಕಾಗಿ:- ಬೆಸ್ಕಾಂ ಅಭಿಯಂತರರು.

4) **ವಾರ್ಡ್‌ನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ:-**

ವಾರ್ಡ್‌ನ ಅಭಿವೃದ್ದಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು ಈ ಕುರಿತು ಸಾರ್ವಜನಿಕರು ಮಾತಾನಾಡಿ ವಾರ್ಡ್ ವಿವಿಧೆಡೆ ತ್ಯಾಜ್ಯಾ ವಿಲೇವಾರಿ ಸ್ಥಳಗಳಲ್ಲಿ ಸೊಳ್ಳೆಗಳ ಪ್ರಮಾಣ ಹೆಚ್ಚಾಗಿದ್ದು ಔಷದಿ ಸಿಂಪಡನೆ ಮಾಡಲು ಸಾರ್ವಜನಿಕರು ಕೋರಿರುತ್ತಾರೆ,

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

5) **ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ:-**

ಈ ಕುರಿತು ಸಾರ್ವಜನಿಕರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ಜಗಧೀಶ್‌ನಗರದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ನಿಯಂತ್ರಿಸಲು ಸಾರ್ವಜನಿಕರು ಕೋರಿರುತ್ತಾರೆ ಹಾಗೂ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತಾನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬ್ಲಿಚಿಂಗ್ ಪೌಡರ್ ಕೊರತೆಯಿದ್ದು ಬ್ಲಿಚಿಂಗ್ ಪೌಡರ್‌ನ್ನು ಸರಬರಾಜು ಮಾಡಲು ಮೇಲಾಧಿಕಾರಿಗೆ ಪತ್ರ ಬರೆಯಲು ಕೋರಿರುತ್ತಾರೆ.

ಕ್ರಮಕ್ಕಾಗಿ:-ವಾರ್ಡ್ ಅಭಿಯಂತರರು.

ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ
ನೊಡೆಲ್ ಅಧಿಕಾರಿಗಳು

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಸಹಾಯಕ ಕಾರ್ಯಪಾಲಕ ಅಭಿಯಂಯತರರು, ಘಣ ತಾಜ್ಯ ನಿರ್ವಹಣೆ ಕೆ.ಆರ್.ಪುರಂ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.